**MVC: 689/2021**
**R.W-1**

## ಹಿರಿಯ ಶ್ರೇಣಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಕೂಡ್ಲಿಗಿ

ದಿನಾಂಕಃ 11.02.2026 ರಂದು ಸಾಕ್ಷಿದಾರರಿಗೆ, ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

### ಮುಖ್ಯ ವಿಚಾರಣೆ: ಎದುರುದಾರರ ಪರ ವಕೀಲರಿಂದಃ

ನಾನು ದಿನಾಂಕ 11.02.2026 ರಂದು ನಮ್ಮ ವಕೀಲರ ಮೂಲಕ, ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದು, ಅದರಲ್ಲಿ ಬರೆದ ಎಲ್ಲಾ ಮಾಹಿತಿಗಳು ಸತ್ಯವಾಗಿರುತ್ತವೆ. ಅದನ್ನು ಬರೆಯಲು ನಮ್ಮ ವಕೀಲರಿಗೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ಅದರಲ್ಲಿರುವ ಎಲ್ಲಾ ಅಂಶಗಳನ್ನು ಅರ್ಥೈಸಿಕೊಂಡು ಅದಕ್ಕೆ ನಾನು ಸಹಿ ಮಾಡಿರುತ್ತೇನೆ ಹಾಗೂ ಈ ಕೆಳಗೆ ನಮೂದಿಸಿರುವ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

ನಾನು ಅಥರೈಜೇಷನ್ ಲೆಟರ್ ನ್ನು ಹಾಜರುಪಡಿಸಿದ್ದು ಅದನ್ನು ನಿ.ಆರ್- 1 ಎಂದು, ಪಾಲಿಸಿ ಕಾಪಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಆರ್- 2 ಎಂದು ಗುರುತಿಸಲಾಯಿತು.

### ಪಾಟೀ ಸವಾಲು ಅರ್ಜಿದಾರರ ಪರ ವಕೀಲರಿಂದ

ಅಪಘಾತವಾದ ಕಾಲಕ್ಕೆ ವಾಹನ ನಂಃ ಕೆಎ-28/ಸಿ-0540 ನೇದ್ದಕ್ಕೆ ವಿಮೆ ಚಾಲ್ತಿಯಲ್ಲಿ ಇತ್ತು ಎಂದರೆ ಎಲ್ಲಾ ದಾಖಲೆಗಳು ಚಾಲ್ತಿಯಲ್ಲಿ ಇದ್ದವು. ಸದರಿ ಅಪಘಾತ ಲಾರಿ ಚಾಲಕನ ತಪ್ಪಿನಿಂದ ಆಗಿದೆ ಎಂದರೆ ಸರಿಯಲ್ಲ. ಮೊ.ಸೈ ಸವಾರನ ತಪ್ಪಿನಿಂದ ಆಗಿದೆ. ಸದರಿ ಅಪಘಾತವು ಲಾರಿ ಚಾಲಕನ ತಪ್ಪಿನಿಂದ ಆಗಿದೆ ಎಂದು ಆತನ ವಿರುದ್ಧ ಭಾ.ದಂ.ಸಂ. ಕಲಂ 336, 283 ಸಹವಾಚಕ ಕಲಂ 15(1)(2)(4) ರಸ್ತೆ ನಿಯಮಾವಳಿ ಅಡಿಯಲ್ಲಿ ದೋಷಾರೋಪಣೆ ಪತ್ರ ಸಲ್ಲಿಸಲಾಗಿದೆ ಎಂದರೆ ಸರಿ. ಲಾರಿ ಚಾಲಕನು ಯಾವುದೇ ಸೂಚನೆ ನೀಡದೆ ರಸ್ತೆ ಮಧ್ಯದಲ್ಲಿ ವಾಹನ ನಿಲ್ಲಿಸಿದ್ದರಿಂದ ಅಪಘಾತವಾಗಿದೆ ಎಂದರೆ ಸರಿಯಲ್ಲ. ನಾವು ಸಹ ಅರ್ಜಿದಾರರಿಗೆ ಪರಿಹಾರ ನೀಡಲು ಬಾದ್ಯಸ್ಥರಾಗಿರುತ್ತೇವೆ ಎಂದರೆ ಸರಿಯಲ್ಲ.

ಮರು ವಿಚಾರಣೆ- ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ).

**ಓ,ಹೇ,ಕೇ,ಸರಿ ಇದೆ.**

**ಹಿ.ಸಿ.ಜೆ ಮತ್ತು ಜೆ.ಎಂ.ಎಫ್.ಸಿ**
**ಕೂಡ್ಲಿಗಿ.**